# ಕೆಳದಿ ಸಂಸ್ಥಾನ 1499-1763

## ಶಿವಪ್ಪನಾಯಕ, ಕಂದಾಯ ಆಡಳಿತ

# ಪೀಠಿಕೆ - INTRODUCTION

- 16ನೆಯ ಶತಮಾನದ ಆರಂಭದಿಂದ 18ನೆಯ ಶತಮಾನದ ಉತ್ತರಾರ್ಧದವರೆವಿಗೂ ಸಮೃದ್ಧಿಯ ತಾಣವಾಗಿ ಮೆರೆದದ್ದು ಕೆಳದಿ ಸಂಸ್ಥಾನ.
- ಕರ್ನಾಟಕದ ಮಲೆನಾಡು ಮತ್ತು ಕರಾವಳಿಯ ಭಾಗಗಳೆರಡನ್ನೂ ತನ್ನ ಆಳ್ವಿಕೆಯಡಿಯಲ್ಲಿ ಇಟ್ಟುಕೊಂಡಿದ್ದರು ಈ ಪ್ರಾಂತ್ಯದ ಅರಸರು.
- ಕೆಳದಿ ಸಂಸ್ಥಾನವನ್ನು ಆಳಿದ ಅರಸರು ಮೊದಲಿಗೆ ವಿಜಯನಗರದ ಅರಸರ ಸಾಮಂತರಾಗಿದ್ದು ಅವರ ಪತನಾನಂತರ ಸ್ವತಂತ್ರ ಆಡಳಿತವನ್ನು ನಡೆಸಿದರು. ಗಂಡಭೇರುಂಡ ಇವರ ಲಾಂಛನವಾಗಿತ್ತು.

ಕೆಳದಿ ರಾಮೇಶ್ವರ ದೇವಾಲಯದಲ್ಲಿರುವ 'ಗಂಡಭೇರುಂಡ'ದ ಚಿತ್ರ
ಸರ್ಪಬಂಧ'ದ ಸುಂದರ ಕೆತ್ತನೆ





# ರಾಜಧಾನಿಗಳು ಮತ್ತು ರಾಜ್ಯದ ವಿಸ್ತಾರ

- ಈ ಸಂಸ್ಥಾನದ ರಾಜಧಾನಿಗಳು ಕ್ರಮವಾಗಿ ಶಿವಮೊಗ್ಗ ಜಿಲ್ಲೆಯ ಸಾಗರದಿಂದ ೮ ಕಿ.ಮೀ. ದೂರದ ಕೆಳದಿ, ೫ ಕಿ.ಮೀ. ದೂರದ ಇಕ್ಕೇರಿ, ಹೊಸನಗರ ತಾಲ್ಲೂಕಿನಲ್ಲಿರುವ ಬಿದನೂರು(ನಗರ) ಮತ್ತು ತೀರ್ಥಹಳ್ಳಿಗೆ ೧೫ ಕಿ.ಮೀ. ದೂರ ದಲ್ಲಿರುವ ಕವಲೆದುರ್ಗಗಳಾಗಿದ್ದವು.
- ಆರಂಭದಲ್ಲಿ ಕೇವಲ ಚಂದ್ರಗುತ್ತಿ, ಕೆಳದಿ, ಇಕ್ಕೇರಿ, ಪೆರ್ಬಯಲು, ಎಲಗಳಲೆ, ಮೇದೂರು, ಕಲಸೆ, ಲಾತವಾಡಿ ಸೇರಿದಂತೆ ಎಂಟು ಮಾಗಣೆಗಳನ್ನು ಒಳಗೊಂಡಿದ್ದ ಈ ಸಂಸ್ಥಾನವು ತನ್ನ ಉಚ್ಛ್ರಾಯಸ್ಥಿತಿಯಲ್ಲಿ ಈಗಿನ ಶಿವಮೊಗ್ಗ ಜಿಲ್ಲೆ, ಚಿಕ್ಕಮಗಳೂರು ಜಿಲ್ಲೆ, ಹಾಸನ ಜಿಲ್ಲೆ, ದಕ್ಷಿಣ ಕನ್ನಡ ಜಿಲ್ಲೆಗಳ ಬಹುಭಾಗ ಮತ್ತು ಧಾರವಾಡ ಜಿಲ್ಲೆ, ಚಿತ್ರದುರ್ಗ ಜಿಲ್ಲೆ, ಉತ್ತರಕನ್ನಡ ಜಿಲ್ಲೆಗಳ ಕೆಲವು ಭಾಗಗಳ ಪ್ರಭುತ್ವವನ್ನು ಸಾಧಿಸಿದ್ದಲ್ಲದೆ ಕೇರಳ ರಾಜ್ಯದ ಕೆಲವು ಭಾಗಗಳನ್ನೂ ಒಳಗೊಂಡಿತ್ತು.

# ಕೆಳದಿಯ ವಾಣಿಜ್ಯ ಚಟುವಟಿಕೆಗಳು

- ಇಲ್ಲಿಯ ಪ್ರಮುಖ ಉತ್ಪನ್ನಗಳಾದ ಮೆಣಸು, ಅಡಿಕೆ, ತಂಬಾಕು, ಶ್ರೀಗಂಧ, ಏಲಕ್ಕಿ, ಜೀರಿಗೆ, ಇಂಗು, ಸಾಸಿವೆ, ತೆಂಗು, ಅರಿಸಿನ ಮುಂತಾದ ನೈಸರ್ಗಿಕ ವಸ್ತುಗಳ ಜೊತೆಗೆ ರೇಷ್ಮೆ, ಬೆಲ್ಲ, ಹತ್ತಿಯಬಟ್ಟೆ ಮುಂತಾದ ಉತ್ಪನ್ನಗಳನ್ನು ಇಲ್ಲಿನ ನಿಡಿದಾದೆ ಕರವಳಿಯ ಬಂದರಿನ ಮೂಲಕ ಮಾರಾಟ ಮಾಡಲಾಗುತ್ತಿತ್ತು.

# ಗಮನವಿಟ್ಟು ಓದಿಕೊಳ್ಳಿರಿ

- ಇದಕ್ಕೆ ಬದಲಾಗಿ ಅರಬ್ಬೀ ಕುದುರೆಗಳು, ಅನೇಕ ಬೆಲೆಬಾಳುವ ವಿದೇಶಿ ಪದಾರ್ಥಗಳು ಆಮದಾಗುತ್ತಿದ್ದವು.
- ಇದರೊಂದಿಗೆ ಪಶ್ಚಿಮಸಮುದ್ರದ ಮೂಲಕ ವಿದೇಶಗಳಿಗೆ ಹೋಗಬೇಕಿದ್ದ ಎಲ್ಲ ಸರಕುಗಳೂ ಇಲ್ಲಿಯ ಸುಂಕದಕಟ್ಟೆಯ ಮೂಲಕವೇ ಹಾದು ಹೋಗಬೇಕಾಗಿದ್ದರಿಂದ ಅಪಾರವಾದ ಸುಂಕವು ಸಂಗ್ರಹವಾಗುತ್ತಿತ್ತು.

# ಸಾಂಸ್ಕೃತಿಕ ಚಟುವಟಿಕೆಗಳು

- ಕೆಳದಿ ಅರಸರ ಕಾಲದಲ್ಲಿ ಕಲೆ, ಸಾಹಿತ್ಯ ಮತ್ತು ಸಂಸ್ಕೃತಿಗೆ ಇಂಬು ಕೊಡಲಾಯಿತು.
- ಶಿವಮೊಗ್ಗೆಯಲ್ಲಿರುವ ಶಿವಪ್ಪನಾಯಕನ ಅರಮನೆ, ಕೆಳದಿಯ ರಾಮೇಶ್ವರ ದೇವಾಲಯ, ವೀರಭದ್ರ ದೇವಾಲಯ, ಬಿದನೂರು ಆಂಜನೇಯ ದೇವಾಲಯ, ಕೋಟೆಗಳು,

ಗುಡ್ಡೆ ವೆಂಕಟರಮಣ ದೇವಾಲಯ, ನೀಲಕಂಠೇಶ್ವರ ದೇವಾಲಯ, ಇಕ್ಕೇರಿಯ ಅಘೋರೇಶ್ವರ ದೇವಾಲಯ, ನಗರದ ಬಳಿ ಇರುವ ದೇವಗಂಗೆ ಮುಂತಾದವು ಕೆಳದಿ ಅರಸರ ವಾಸ್ತುಶಿಲ್ಪ ಚಾತುರ್ಯವನ್ನು ಹೇಳುತ್ತವೆ.

# ಸಾಹಿತ್ಯ ಕ್ಷೇತ್ರ

- ಈ ಅರಸರು ಕನ್ನಡ ಮತ್ತು ಸಂಸ್ಕೃತ ಎರಡೂ ಭಾಷೆಯ ಕವಿ-ವಿದ್ವಾಂಸರಿಗೆ ಆಶ್ರಯವನ್ನಿತ್ತಿದ್ದರು.
- ಅರಸರೂ ಸಹ ಕವಿ-ವಿದ್ವಾಂಸರುಗಳಾಗಿದ್ದು ಅನೇಕ ಕೃತಿಗಳನ್ನು ರಚಿಸಿದ್ದಾರೆ.
- ಹಿರಿಯ ವೆಂಕಟಪ್ಪನಾಯಕನು ಶಿವಗೀತಾವ್ಯಾಖ್ಯಾ , ವೀರಮಾಹೇಶ್ವರ ಸುಧಾವಾರ್ಧಿ , ಹಾಗೂ ತತ್ವಾಧಿಕಾರ ನಿರ್ಣಯಂ ಎಂಬ ಮೂರು ಕೃತಿಗಳನ್ನು ಬರೆದಿದ್ದಾನೆ.
- ಹಿರಿಯ ಬಸವಪ್ಪನಾಯಕನು ಶಿವತತ್ವರತ್ನಾಕರ , ಸುಭಾಷಿತ ಸುರದ್ರುಮ, ಸೂಕ್ತಿ ಸುಧಾಕರ ಮುಂತಾದ ಕೃತಿಗಳನ್ನು ರಚಿಸಿದ್ದಾನೆ.
- ಲಿಂಗಣ್ಣ ಕವಿಯ ಕೆಳದಿ ನೃಪವಿಜಯಂ , ಗಂಗಾದೇವಿಯ ಕೆಳದಿ ರಾಜ್ಯಾಭ್ಯುದಯಂ , ತಿರುಮಲ ಭಟ್ಟನ ಕರ್ನಾಟಕ ಶಿವಗೀತೆ , ಪರಮದೇವನ ತುರಂಗ ಭಾರತ ಮುಂತಾದವು ಈ ಕಾಲದ ಪ್ರಸಿದ್ಧ ಕೃತಿಗಳು.

# ಕೆಳದಿ ಅರಸರ ವಂಶಾವಳಿ
# ಕೆಳದಿ ಅರಸರ ಕಾಲದ ಸಾಹಿತ್ಯ ಮತ್ತು ಅಂದಿನ ಶಾಸನಗಳನ್ನು ಅನುಸರಿಸಿ ಸಂಶೋಧಕರು ಈ ನಾಯಕರ ಕಾಲವನ್ನು ಅಂದಾಜಿಸಿದ್ದಾರೆ.

- ಚೌಡಪ್ಪ (ಸುಮಾರು ೧೫೦೦-೧೫೩೦)
- ಚೌಡಪ್ಪನಾಯಕ ಎಂದೂ ಹೆಸರಾದ ಈತ ಪಳ್ಳಿಚ್ಚೈಲು ಎಂಬ ಹಳ್ಳಿಯಲ್ಲಿ ರೈತ ದಂಪತಿಗಳ ಮಗನಾಗಿ ಜನಿಸುತ್ತಾನೆ.
- ಸ್ವಸಾಮರ್ಥ್ಯದಿಂದ ತನ್ನದೇ ಪಾಳೆಯಪಟ್ಟನ್ನು ಕಟ್ಟಿಕೊಂಡು ನಾಯಕನಾಗಿ ಬೆಳೆಯುತ್ತಾನೆ.
- ಸದಾಶಿವ ನಾಯಕ (ಸುಮಾರು ೧೫೩೦-೧೫೬೭)
- ಚೌಡಪ್ಪನಾಯಕನ ಇಬ್ಬರು ಮಕ್ಕಳಲ್ಲಿ ಹಿರಿಯವನು ಸದಾಶಿವ ನಾಯಕ. ಕಿರಿಯವನು ಭದ್ರಪ್ಪನಾಯಕ.
- ಸದಾಶಿವ ನಾಯಕನು ವಿಜಯನಗರದ ವಿರೋಧಿಗಳನ್ನು ಹಿಮ್ಮೆಟ್ಟಿಸಿ ಕೇರಳ ರಾಜ್ಯದ ಹಲವು ಭಾಗಗಳನ್ನು ವಶಪಡಿಸಿಕೊಳ್ಳುತ್ತಾನೆ.

# ಶಿವಪ್ಪನಾಯಕ (೧೬೪೫-೧೬೬೦)

- ಕೆಳದಿ ಸಂಸ್ಥಾನವು ಉಚ್ಛ್ರಾಯ ಸ್ಥಿತಿಯನ್ನು ಮುಟ್ಟಿದ್ದು ಈತನ ಕಾಲದಲ್ಲೆ.
- ರಾಜಧಾನಿ ಬಿದನೂರುನಗರವನ್ನು ಅಭಿವೃದ್ಧಿಪಡಿಸಿ ಕೋಟೆಗಳನ್ನು ನಿರ್ಮಿಸಿದನು.
- ದೇಶದ ನಾನಾ ಭಾಗಗಳ ವ್ಯಾಪಾರಿಗಳನ್ನೂ ಕುಶಲಕರ್ಮಿಗಳನ್ನೂ ರಾಜಧಾನಿಗೆ ಆಹ್ವಾನಿಸಿ ವ್ಯಾಪಾರ-ವಾಣಿಜ್ಯವನ್ನು ಉತ್ತಮ ಪಡಿಸಿದನು.
- ಈತನ ಆಡಳಿತ ವ್ಯವಸ್ಥೆಯು ಶಿವಪ್ಪನಾಯಕನ ಶಿಸ್ತು ಎಂದು ಪ್ರಸಿದ್ಧವಾಗಿದೆ.
- ಪೋರ್ಚುಗೀಸರನ್ನೂ ಸೋಲಿಸಿದ ಹೆಗ್ಗಳಿಕೆ ಇವನದು.
- ಇವನ ನಂತರ ೧೨ ವರುಷಗಳ ಕಾಲ ಕೆಳದಿಯ ವೈಭವವು ಕೊಂಚ ಮಂಕಾಯಿತು.

- ಎರಡನೆ ವೆಂಕಟಪ್ಪ ನಾಯಕ (೧೬೬೦-೧೬೬೧)
  ಭದ್ರಪ್ಪ ನಾಯಕ (೧೬೬೧-೧೬೬೩)
  ಹಿರಿಯ ಸೋಮಶೇಖರ ನಾಯಕ(೧೬೬೩-೧೬೭೧)
- ಚೆನ್ನಮ್ಮ (೧೬೭೧-೧೬೯೭)
- ಹಿರಿಯ ಸೋಮಶೇಖರ ನಾಯಕನ ಪತ್ನಿಯಾದ ಈಕೆಯು ಮಂಕಾಗಿದ್ದ ಕೆಳದಿ ಸಂಸ್ಥಾನವನ್ನು ತನ್ನ ಸಾಹಸ ಹಾಗೂ ಸಾಮರ್ಥ್ಯಗಳಿಂದ ಉತ್ತಮಗೊಳಿಸಿದಳು.
- ಹುಲಿಕೆರೆ ಎಂಬಲ್ಲಿ ಕೋಟೆಯನ್ನು ಕಟ್ಟಿಸಿ ಅದಕ್ಕೆ ಚೆನ್ನಗಿರಿ ಎಂದು ಹೆಸರಿಟ್ಟಳು.
- ಶಿವಾಜಿಯ ಮಗನಾದ ರಾಜಾರಾಮನಿಗೆ ಆಶ್ರಯವನ್ನು ನೀಡಿ ಔರಂಗಜೇಬನಂತಹ ಪ್ರಬಲನನ್ನು ಎದುರಿಸಿದ ದಿಟ್ಟೆ ಈಕೆ.

- ಬಸವಪ್ಪನಾಯಕ (೧೬೯೭-೧೭೧೪)
  ಇಮ್ಮಡಿ ಸೋಮಶೇಖರ ನಾಯಕ (೧೭೧೪-೧೭೩೯)
  ಇಮ್ಮಡಿ ಬಸವಪ್ಪ ನಾಯಕ (೧೭೩೯-೧೭೫೪)
  ವೀರಮ್ಮಾಜಿ -ಚೆನ್ನಬಸವನಾಯಕ
- ಇಮ್ಮಡಿ ಬಸವಪ್ಪ ನಾಯಕನ ಕಾಲದವರೆವಿಗೂ ಉತ್ತಮವಾಗಿಯೇ ಇದ್ದ ಆಡಳಿತವು ವೀರಮ್ಮಾಜಿಯ ಕಾಲದಲ್ಲಿ ಹಿಡಿತ ತಪ್ಪಿ ಗೊಂದಲಗಳ ಗೂಡಾಗುತ್ತದೆ.
- ಈಕೆಯ ಮಗನಾದ ಚೆನ್ನಬಸವ ನಾಯಕನು (೧೭೫೪-೧೭೫೭) ಸಮರ್ಥನಾಗಿದ್ದರೂ ಸಹ ಅಧಿಕಾರವನ್ನು ಬಿಟ್ಟುಕೊಡದ ತಾಯಿ ಮತ್ತು ಆಂತರಿಕ ಹಿತಾಸಕ್ತಿಗಳ ದೆಸೆಯಿಂದ ಈತನಿಗೆ ಯಾವುದೇ ಪ್ರಮುಖ ನಿರ್ಧಾರಗಳನ್ನು ತೆಗೆದುಕೊಳ್ಳಲಾಗುವುದಿಲ್ಲ.
- ಈ ದೌರ್ಬಲ್ಯವನ್ನು ಅರಿಯುವ ಹೈದರಾಲಿಯು ಕೆಳದಿಯ ಮೇಲೆ ೧೭೬೩ರಲ್ಲಿ ಆಕ್ರಮಣ ಮಾಡುವುದರೊಂದಿಗೆ ಸಂಸ್ಥಾನವು ಅವನತಿಯ ಹಾದಿಯನ್ನು ಹಿಡಿಯುತ್ತದೆ.

# ಕೆಳದಿ ನಾಯಕರ ನಾಣ್ಯಗಳು

- ಕೆಳದಿ ನಾಯಕರು ವಿಜಯನಗರದ ನಾಣ್ಯ ಪದ್ಧತಿಯನ್ನೇ ಅನುಸರಿಸಿದ್ದಾರೆ.
- ನಮೂನೆ, ಚಿಹ್ನೆ ಮತ್ತು ತೂಕಗಳಲ್ಲಿ ಸಾಮ್ಯತೆಯು ಕಂಡುಬರುತ್ತದೆ.
- ಕೆಳದಿ ರಾಜ್ಯದ ಟಂಕಶಾಲೆಯು ಬಿದನೂರು ಮತ್ತು ಇಕ್ಕೇರಿ ಗಳಲ್ಲಿ ಇದ್ದೀತೆಂದು ವಿದ್ವಾಂಸರು ಅಭಿಪ್ರಾಯ ಪಡುತ್ತಾರೆ.
- ಕೆಳದಿ ನಾಯಕರ ಚಿನ್ನದ ನಾಣ್ಯಗಳು ಹೆಚ್ಚು ದೊರೆತಿಲ್ಲವಾದರೂ ಪ್ರಸಿದ್ಧವಾದ ಇಕ್ಕೇರಿ ವರಹವನ್ನು ಸದಾಶಿವ ನಾಯಕನು ಅಚ್ಚು ಮಾಡಿಸಿದನೆಂದು ಹೇಳಲಾಗಿದೆ.
- ಈ ನಮೂನೆಯ ನಾಣ್ಯದ ಒಂದು ಬದಿಯಲ್ಲಿ ಶಿವ-ಪಾರ್ವತಿಯರ ಚಿತ್ರವಿದ್ದು ಇನ್ನೊಂದು ಬದಿಯಲ್ಲಿ ಶ್ರೀ ಸದಾಶಿವ ಎಂದು ನಾಗರಿಯಲ್ಲಿ ಬರೆಯಿಸಲಾಗಿದೆ.
- ಹಾಗೆಯೇ ಗಂಡಭೇರುಂಡ, ನಂದಿಯ ಚಿತ್ರಗಳೂ ನಾಣ್ಯಗಳಲ್ಲಿ ಕಂಡು ಬರುತ್ತದೆ.